# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 703 |
| 2 | ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಎನ್.ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3 | ಉತ್ತರಿಸಬೇಕಾದ ಸಚಿವರು | : | ತೋಟಗಾರಿಕೆ ಹಾಗೂ ಯೋಜನೆ,ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು. |
| 4 | ಉತ್ತರಿಸಬೇಕಾದ ದಿನಾಂಕ | : | 17-09-2021. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರವು ಯಾವ ಬೆಳೆಗಳನ್ನು ತೋಟಗಾರಿಕಾ ಬೆಳೆಗಳೆಂದು ಪರಿಗಣಿಸಿದೆ; ಮಂಡ್ಯ ಜಿಲ್ಲೆಯಲ್ಲಿ ತೋಟಗಾರಿಕೆ ಬೆಳೆ ಉತ್ಪಾದಿಸುವ ಪ್ರದೇಶದ ವಿಸ್ತೀರ್ಣವೆಷ್ಟು; ಈ ಪ್ರದೇಶದಲ್ಲಿ ಯಾವ ಯಾವ ಬೆಳೆಗಳನ್ನು ಎಷ್ಟು ಪ್ರಮಾಣದಲ್ಲಿ ಉತ್ಪಾದಿಸಲಾಗುತ್ತಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು) | ಸರ್ಕಾರವು ಎಲ್ಲಾ ರೀತಿಯ ಹಣ್ಣಿನ ಬೆಳೆಗಳು, ತರಕಾರಿ ಬೆಳೆಗಳು, ಹೂವಿನ ಬೆಳೆಗಳು, ತೋಟದ ಬೆಳೆಗಳು, ಸಾಂಬಾರು ಪದಾರ್ಥ ಬೆಳೆಗಳು, ಔಷಧೀಯ ಹಾಗೂ ಸುಗಂಧ ದ್ರವ್ಯ ಬೆಳೆಗಳನ್ನು ತೋಟಗಾರಿಕಾ ಬೆಳೆಗಳೆಂದು ಪರಿಗಣಿಸಿದೆ ಮಂಡ್ಯ ಜಿಲ್ಲೆಯಲ್ಲಿ ತೋಟಗಾರಿಕೆ ಬೆಳೆ ಉತ್ಪಾದಿಸುವ ಪ್ರದೇಶದ ವಿವರಗಳನ್ನು ಅನುಬಂಧ-1ರಲ್ಲಿ ಸಿದ್ಧಪಡಿಸಿ, ಸಿ.ಡಿ. ಮೂಲಕ ಒದಗಿಸಿದೆ. |
| ಆ) | ತೋಟಗಾರಿಕೆ ಇಲಾಖೆಯಿಂದ ರೈತರ ಅನುಕೂಲಕ್ಕಾಗಿ ರೂಪಿಸಿರುವ ಯೋಜನೆಗಳು ಯಾವುವು; ಈ ಯೋಜನೆಗಳಿಗಾಗಿ ಕಳೆದ 3 ವರ್ಷದಲ್ಲಿ ಮಂಡ್ಯ ಜಿಲ್ಲೆಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ಮತ್ತು ಖರ್ಚಾದ ಅನುದಾನವೆಷ್ಟು; (ಈ ಯೋಜನೆಗಳ ಫಲಾನುಭವಿಗಳ ವಿವರಗಳೊಂದಿಗೆ ಯೋಜನೆವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು) | ತೋಟಗಾರಿಕೆ ಇಲಾಖೆಯಿಂದ ರೈತರ ಅನುಕೂಲಕ್ಕಾಗಿ ರೂಪಿಸಿರುವ ಯೋಜನೆಗಳನ್ನು ಹಾಗೂ ಕಳೆದ 03 ವರ್ಷದಲ್ಲಿ ಮಂಡ್ಯ ಜಿಲ್ಲೆಗೆ ಬಿಡುಗಡೆಯಾಗಿರುವ ಅನುದಾನ ಹಾಗೂ ಖರ್ಚಾದ ಅನುದಾನದ ಮಾಹಿತಿಗಳನ್ನು ಯೋಜನೆವಾರು, ಫಲಾನುಭವಿವಾರು ಹಾಗೂ ತಾಲ್ಲೂಕುವಾರು ಅನುಬಂಧ-2ರಲ್ಲಿ ಸಿದ್ಧಪಡಿಸಿ ಸಿ.ಡಿ. ಮೂಲಕ ಒದಗಿಸಿದೆ. |
| ಇ) | ರೈತರು ಬೆಳೆಯುತ್ತಿರುವ ತೋಟಗಾರಿಕಾ ಬೆಳೆಗಳ ಸಂರಕ್ಷಣೆಗಾಗಿ ಹಾಸನ ಜಿಲ್ಲೆಯಲ್ಲಿ ಶೀಥಲೀಕರಣ ಸಂಗ್ರಹಾಗಾರಗಳ ನಿರ್ಮಾಣ ಮಾಡಲಾಗಿದೆಯೇ (ಮಾಡಿದ್ದಲ್ಲಿ ಅವುಗಳ ವಿವರ ನೀಡುವುದು) | ರೈತರು ಬೆಳೆಯುತ್ತಿರುವ ತೋಟಗಾರಿಕೆ ಬೆಳೆಗಳ ಸಂರಕ್ಷಣೆಗಾಗಿ ಹಾಸನ ಜಿಲ್ಲೆಯಲ್ಲಿ ಒಟ್ಟು 58000 ಮೆ.ಟ. ಸಾಮರ್ಥ್ಯವುಳ್ಳ 8 ಸಂಖ್ಯೆಯ ಶೀತಲಿಕರಣ ಸಂಗ್ರಹಾಗಾರಗಳು ಇರುತ್ತವೆ. ವಿವರ ಅನುಬಂಧ 3ರಲ್ಲಿ ನೀಡಲಾಗಿದೆ. |

| | | |
|---|---|---|
| ಈ) | ನಾಗಮಂಗಲದ ಹಿರಿಯ ಸಹಾಯಕ ತೋಟಗಾರಿಕಾ ನಿರ್ದೇಶಕರ ಕಛೇರಿ ಆವರಣದಲ್ಲಿ ಇದ್ದ ಮರಗಳನ್ನು ಕಡಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಯಾವ ಕಾರಣಕ್ಕೆ ಕಡಿಯಲಾಗಿದೆ ಈ ಸಂಬಂಧ ಅರಣ್ಯ ಇಲಾಖೆಯ ಅನುಮತಿ ಪಡೆಯಲಾಗಿದೆಯೇ? (ಅರಣ್ಯಾಧಿಕಾರಿಗಳ ಅನುಮತಿ ಪತ್ರ ನೀಡುವುದು) | ನಾಗಮಂಗಲ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಛೇರಿಯ ಆವರಣದಲ್ಲಿ ಇದ್ದ ಹಳೆಯ ಮಾವಿನ ಮರಗಳನ್ನು ಪುನಶ್ಚೇತನದ ಉದ್ದೇಶಕ್ಕಾಗಿ ಕತ್ತರಿಸಲಾಗಿದೆ.<br>ಈ ಸಂಬಂಧ ಅರಣ್ಯ ಇಲಾಖೆಯ ಅನುಮತಿಗಾಗಿ ಈಗಾಗಲೇ ಪತ್ರ ವ್ಯವಹರಿಸಲಾಗಿದೆ.<br>(ಪ್ರತಿ ಲಗತ್ತಿಸಿದೆ) |

**No.HORTI 379 HGM 2021**

(ಮುನಿರತ್ನ)
ತೋಟಗಾರಿಕೆ ಮತ್ತು ಯೋಜನೆ, ಕಾರ್ಯಕ್ರಮ
ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು.